## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಪರಿಶಿಷ್ಟ ಜಾತಿಗೆ ಸೇರಿದ ಪಾರಂಪರಿಕ ಚರ್ಮ ಕುಶಲಕರ್ಮಿಗಳು ಎದುರಿಸುತ್ತಿರುವ ಸಮಸ್ಯೆಗಳನ್ನು ಪರಿಹರಿಸಲು ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜಿಲ್ಲಾ ಮಟ್ಟದ ಚರ್ಮ ಕುಶಲಕರ್ಮಿಗಳ ಕುಂದುಕೊರತೆ ನಿವಾರಣೆ ಸಮಿತಿಯನ್ನು ರಚಿಸುವ ಬಗ್ಗೆ.

**ಓದಲಾಗಿದೆ:** ವ್ಯವಸ್ಥಾಪಕ ನಿರ್ದೇಶಕರು, ಡಾ|| ಬಾಬು ಜಗಜೀವನ ರಾಂ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮ, ಇವರ ಪತ್ರ ಸಂಖ್ಯೆ: ಲಿಡ್ಕರ್/ ಅಭಿವೃದ್ಧಿ/ 2021-22/2101, ದಿನಾಂಕ:31.12.2021.

******

**ಪ್ರಸ್ತಾವನೆ:**

ಮೇಲೆ ಓದಲಾದ ದಿನಾಂಕ:31.12.2021 ರ ಪತ್ರದಲ್ಲಿ ವ್ಯವಸ್ಥಾಪಕ ನಿರ್ದೇಶಕರು, ಡಾ|| ಬಾಬು ಜಗಜೀವನ ರಾಂ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮ ಇವರು ನಿಗಮವು ಪರಿಶಿಷ್ಟ ಜಾತಿ ಚರ್ಮ ಕುಶಲಕರ್ಮಿಗಳ ಶ್ರೇಯೋಭಿವೃದ್ಧಿಗಾಗಿ ಹಲವಾರು ಅಭಿವೃದ್ಧಿ ಕಾರ್ಯಕ್ರಮಗಳನ್ನು ಹಮ್ಮಿಕೊಂಡು ಅನುಷ್ಠಾನಗೊಳಿಸುತ್ತಿದೆ. ರಾಜ್ಯದಲ್ಲಿ ಸುಮಾರು 50,000 ಚರ್ಮಕಾರರ ಕುಟುಂಬಗಳಿದ್ದು, ಚರ್ಮಗಾರಿಕೆ ವೃತ್ತಿಯಲ್ಲಿ ತೊಡಗಿರುತ್ತಾರೆ. ನಿಗಮದ ಮಾನ್ಯ ಅಧ್ಯಕ್ಷರು ರಾಜ್ಯಾದ್ಯಂತ ಪ್ರವಾಸ ಮಾಡಿದ ಸಂದರ್ಭದಲ್ಲಿ ಮತ್ತು ಕುಂದು ಕೊರತೆ ಸಭೆ ನಡೆಸಿ ಅಹವಾಲುಗಳನ್ನು ಆಲಿಸಿದ ಸಂದರ್ಭದಲ್ಲಿ ಕಂಡು ಬಂದಂತೆ ಅವರು ಹಲವು ಸಮಸ್ಯೆಗಳನ್ನು ಎದುರಿಸುತ್ತಿದ್ದಾರೆ. ಚರ್ಮಕಾರರು ರಸ್ತೆ ಬದಿ ಬಸ್/ರೈಲ್ವೆ ನಿಲ್ದಾಣದ ಪ್ರದೇಶದಲ್ಲಿ ಹೋಟೆಲ್‌ಗಳ ಮುಂಭಾಗ ಮತ್ತು ಮಾರುಕಟ್ಟೆ ಮತ್ತಿತರ ಪ್ರದೇಶಗಳಲ್ಲಿ ಬಿಸಿಲು, ಮಳೆ ಗಾಳಿ ಎನ್ನದೇ ಪಾದರಕ್ಷೆ ದುರಸ್ತಿ, ತಯಾರಿಕೆ ಮತ್ತು ಪಾಲೀಷ್ ಮಾಡುವ ಕಾಯಕದಲ್ಲಿ ತೊಡಗಿರುತ್ತಾರೆ. ನಿಗಮದ ಯೋಜನೆಗಳ ಸೌಲಭ್ಯಗಳನ್ನು ಪಡೆಯಲು ಪಾರಂಪರಿಕವಾಗಿ ಚರ್ಮಗಾರಿಕೆ ವೃತ್ತಿಯಲ್ಲಿ ತೊಡಗಿರುವ ಕುಶಲಕರ್ಮಿಗಳು ಕ್ಷೇತ್ರ ಮಟ್ಟದಲ್ಲಿ/ಜಿಲ್ಲಾ ಮಟ್ಟದಲ್ಲಿ ಅನೇಕ ಸಮಸ್ಯೆಗಳನ್ನು ಎದುರಿಸುತ್ತಿದ್ದು ವೃತ್ತಿಯಿಂದ ವಿಮುಖರಾಗಿ ನಿರುದ್ಯೋಗ ಸಮಸ್ಯೆ ಎದುರಿಸುತ್ತಿದ್ದಾರೆ. ಈ ಸಮಸ್ಯೆಗಳ ಬಗ್ಗೆ ನಿಗಮದ 213 ನೇ ಮಂಡಳಿ ಸಭೆಯಲ್ಲಿ ಚರ್ಚಿಸಿ, ಚರ್ಮ ಕುಶಲಕರ್ಮಿಗಳ ಕುಂದುಕೊರತೆ / ಸಮಸ್ಯೆಗಳನ್ನು ಬಗೆಹರಿಸಲು ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಒಂದು ಸಮಿತಿಯನ್ನು ರಚಿಸಲು ಸರ್ಕಾರಕ್ಕೆ ಶಿಫಾರಸ್ಸು ಮಾಡಲು ತೀರ್ಮಾನಿಸಲಾಗಿದೆ. ಆದ್ದರಿಂದ ಚರ್ಮ ಕುಶಲಕರ್ಮಿಗಳು ನಿರಂತರವಾಗಿ ಎದುರಿಸುತ್ತಿರುವ ಸಮಸ್ಯೆಗಳನ್ನು ಆಲಿಸಿ, ಪರಿಶೀಲಿಸಿ ಪರಿಹಾರೋಪಾಯದ ಮಾರ್ಗಗಳನ್ನು ಕಂಡುಹಿಡಿದು ಬಗೆಹರಿಸಲು ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಕೆಳಕಂಡ ಅಧಿಕಾರಿಗಳ ಸಮಿತಿಯನ್ನು ರಚಿಸಲು ಪ್ರಸ್ತಾಪಿಸಿರುತ್ತಾರೆ.

| ಕ್ರ.ಸಂ | ವಿವರ | ಹುದ್ದೆ |
|---|---|---|
| 1 | ಜಿಲ್ಲಾಧಿಕಾರಿಗಳು | ಅಧ್ಯಕ್ಷರು |
| 2 | ಜಂಟಿ / ಉಪ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ | ಸದಸ್ಯ ಕಾರ್ಯದರ್ಶಿ, |

Scanned with CamScanner

| | | |
|---|---|---|
| 3 | ಜಿಲ್ಲಾ ವ್ಯವಸ್ಥಾಪಕರು, ಕರ್ನಾಟಕ ಆದಿಜಾಂಬವ ಅಭಿವೃದ್ಧಿ ನಿಗಮ | ಸದಸ್ಯರು |
| 4 | ಸಂಬಂಧಪಟ್ಟ ಮಹಾನಗರ ಪಾಲಿಕೆ, ನಗರಸಭೆ, ಪುರಸಭೆ, ಪಟ್ಟಣ ಪಂಚಾಯಿತಿ ಮುಖ್ಯಸ್ಥರು | ಸದಸ್ಯರು |
| 5 | ಲಿಡ್‌ಕರ್ ಜಿಲ್ಲಾ ಸಂಯೋಜಕರು | ಸದಸ್ಯರು. |
| 6 | ಚರ್ಮ ಕುಶಲಕರ್ಮಿಗಳ ಸಮಸ್ಯೆಗಳನ್ನು ಅರಿತ ಇಬ್ಬರು ಪ್ರತಿನಿಧಿಗಳು | ಸದಸ್ಯರು. |

ಮೇಲ್ಕಂಡ ಸಮಿತಿಯು ಪ್ರತಿ 6 ತಿಂಗಳಿಗೊಮ್ಮೆ ಸಭೆ ಜರುಗಿಸಿ ಚರ್ಮ ಕುಶಲಕರ್ಮಿಗಳ ಕುಂದು ಕೊರತೆಗಳನ್ನು ಆಲಿಸಿ ಪರಿಹಾರ ಮಾರ್ಗಗಳನ್ನು ಸೂಚಿಸಿ ಅವರ ಸರ್ವತೋಮುಖ ಅಭಿವೃದ್ಧಿಗಾಗಿ ಅನುಷ್ಠಾನಗೊಳಿಸುತ್ತಿರುವ ಯೋಜನೆಗಳನ್ನು ಯಾವುದೇ ಅಡೆತಡೆಗಳಿಲ್ಲದೆ ಜಾರಿಗೊಳಿಸಲು ಅನುವು ಮಾಡಿಕೊಡಬಹುದಾಗಿದೆ. ಸದರಿ ಸಮಿತಿಗೆ ಚರ್ಮ ಕುಶಲಕರ್ಮಿಗಳ ಒಳಿತಿಗಾಗಿ ಸಂಬಂಧ ಪಟ್ಟ ಅಧಿಕಾರಿಗಳಿಗೆ ಪ್ರಾಧಿಕಾರಿಗಳಿಗೆ ಸಲಹೆ ಸೂಚನೆಗಳನ್ನು ನೀಡಲು ಅಧಿಕಾರ ನೀಡಬಹುದಾಗಿದೆ. ಪರಿಶಿಷ್ಟ ಜಾತಿಯ ಚರ್ಮ ಕುಶಲಕರ್ಮಿಗಳ ಕುಂದು ಕೊರತೆಗಳನ್ನು ಪರಿಹರಿಸಿ ತನ್ಮೂಲಕ ಅವರ ಸಮಗ್ರ ಅಭಿವೃದ್ಧಿಗೆ ಅನುಕೂಲವಾಗುವಂತೆ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜಿಲ್ಲಾ ಮಟ್ಟದ ಚರ್ಮ ಕುಶಲಕರ್ಮಿಗಳ ಕುಂದು ಕೊರತೆ ನಿವಾರಣೆ ಸಮಿತಿಯನ್ನು ರಚಿಸಿ ಆದೇಶ ಹೊರಡಿಸುವಂತೆ ಕೋರಿರುತ್ತಾರೆ.

ಮೇಲ್ಕಂಡ ಅಂಶಗಳನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ:SWD/24/SLP/2022, ಬೆಂಗಳೂರು,**
**ದಿನಾಂಕ: 03 ನೇ ಜೂನ್ 2022**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಚರ್ಮ ಕುಶಲಕರ್ಮಿಗಳು ನಿರಂತರವಾಗಿ ಎದುರಿಸುತ್ತಿರುವ ಸಮಸ್ಯೆಗಳನ್ನು ಆಲಿಸಿ, ಪರಿಶೀಲಿಸಿ ಪರಿಹಾರೋಪಾಯದ ಮಾರ್ಗಗಳನ್ನು ಕಂಡುಹಿಡಿದು ಬಗೆಹರಿಸಲು ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯ ಕೆಳಕಂಡ ಅಧಿಕಾರಿಗಳ ಸಮಿತಿಯನ್ನು ರಚಿಸಿ ಆದೇಶಿಸಿದೆ.

| ಕ್ರ.ಸಂ | ವಿವರ | ಹುದ್ದೆ |
|---|---|---|
| 1 | ಜಿಲ್ಲಾಧಿಕಾರಿಗಳು | ಅಧ್ಯಕ್ಷರು |
| 2 | ಜಂಟಿ / ಉಪ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ | ಸದಸ್ಯ ಕಾರ್ಯದರ್ಶಿ, |
| 3 | ಜಿಲ್ಲಾ ವ್ಯವಸ್ಥಾಪಕರು, ಕರ್ನಾಟಕ ಆದಿಜಾಂಬವ ಅಭಿವೃದ್ಧಿ ನಿಗಮ | ಸದಸ್ಯರು |
| 4 | ಸಂಬಂಧಪಟ್ಟ ಮಹಾನಗರ ಪಾಲಿಕೆ, ನಗರಸಭೆ, ಪುರಸಭೆ, ಪಟ್ಟಣ ಪಂಚಾಯಿತಿ ಮುಖ್ಯಸ್ಥರು | ಸದಸ್ಯರು |
| 5 | ಲಿಡ್‌ಕರ್ ಜಿಲ್ಲಾ ಸಂಯೋಜಕರು | ಸದಸ್ಯರು. |

Scanned with CamScanner

| | | |
|---|---|---|
| 6 | ಚರ್ಮ ಕುಶಲಕರ್ಮಿಗಳ ಸಮಸ್ಯೆಗಳನ್ನು ಅರಿತ ಐದು ಜನ ಪ್ರತಿನಿಧಿಗಳು (ಆಯಾ ಜಿಲ್ಲಾಧಿಕಾರಿಗಳು ಪ್ರತಿನಿಧಿಗಳನ್ನು ನೇಮಿಸುವುದು - ಚರ್ಮ ಕುಶಲಕರ್ಮಿಗಳ ಸಂಘದ ಒಬ್ಬ ಪ್ರತಿನಿಧಿ, ತಲಾ ಇಬ್ಬರು ಪುರುಷ ಮತ್ತು ಮಹಿಳಾ ಪ್ರತಿನಿಧಿ ) | ಸದಸ್ಯರು. |

ಮೇಲ್ಕಂಡ ಸಮಿತಿಯು ಪ್ರತಿ 6 ತಿಂಗಳಿಗೊಮ್ಮೆ ಸಭೆ ಜರುಗಿಸಿ ಚರ್ಮ ಕುಶಲಕರ್ಮಿಗಳ ಕುಂದು ಕೊರತೆಗಳನ್ನು ಆಲಿಸಿ ಪರಿಹಾರ ಮಾರ್ಗಗಳನ್ನು ಸೂಚಿಸಿ ಅವರ ಸರ್ವತೋಮುಖ ಅಭಿವೃದ್ಧಿಗಾಗಿ ಅನುಷ್ಠಾನಗೊಳಿಸುತ್ತಿರುವ ಯೋಜನೆಗಳನ್ನು ಯಾವುದೇ ಅಡೆತಡೆಗಳಿಲ್ಲದೆ ಜಾರಿಗೊಳಿಸಲು ಕ್ರಮವಹಿಸುವುದು. ಸದರಿ ಸಮಿತಿಯು ಚರ್ಮ ಕುಶಲಕರ್ಮಿಗಳ ಒಳಿತಿಗಾಗಿ ಕೆಳಕಂಡಂತೆ ಸಂಬಂಧ ಪಟ್ಟ ಅಧಿಕಾರಿಗಳಿಗೆ ಪ್ರಾಧಿಕಾರಿಗಳಿಗೆ ಸಲಹೆ ಸೂಚನೆಗಳನ್ನು ನೀಡಲು ಅಧಿಕಾರ ನೀಡಿದೆ.

1. ನಂದಿನಿ/ ಹಾಪ್‌ಕಾಮ್ಸ್ ಬೂತ್‌ಗಳಿಗೆ ಒದಗಿಸುವಂತೆ ಪಾದಚಾರಿಗಳಿಗೆ ತೊಂದರೆ ಆಗದ ರೀತಿಯಲ್ಲಿ ರಸ್ತೆ ಬದಿ ಮತ್ತು ಮಾರುಕಟ್ಟೆ ಪ್ರದೇಶಗಳಲ್ಲಿ ಚರ್ಮಕಾರರ ಕುಟೀರಗಳನ್ನು / ಮಳಿಗೆಗಳನ್ನು ಸ್ಥಾಪಿಸಿಕೊಳ್ಳಲು ಸ್ಥಳಾವಕಾಶ ಒದಗಿಸುವುದು.
2. ಚರ್ಮ ಹದ ಮಾಡುವ ಸಂಬಂಧ ಮಾಲಿನ್ಯ ನಿಯಂತ್ರಣ ಮಂಡಳಿಯಿಂದ ಅನುಮತಿ ನೀಡುವುದು.
3. ಚರ್ಮಕಾರರು ಸರ್ಕಾರದ / ನಿಗಮಗಳ ವಿವಿಧ ಯೋಜನೆಗಳ ಸೌಲಭ್ಯ ಪಡೆಯಲು ಅನುವಾಗುವಂತೆ ಅರ್ಜಿಯೊಂದಿಗೆ ಸಲ್ಲಿಸಬೇಕಾಗಿರುವ ವೃತ್ತಿ ಪ್ರಮಾಣ ಪತ್ರ ಮತ್ತು ಗುರುತಿನ ಚೀಟಿಗಳನ್ನು ನೀಡಲು ಸಂಬಂಧಿಸಿದ ಪ್ರಾಧಿಕಾರಗಳಿಗೆ ಸೂಚಿಸುವುದು.
4. ಸ್ಥಳೀಯ ಸಂಸ್ಥೆಗಳು ನಿರ್ಮಿಸುವ ವಾಣಿಜ್ಯ ಸಂಕೀರ್ಣಗಳಲ್ಲಿ ಕೆಲವು ಮಳಿಗೆಗಳನ್ನು ಚರ್ಮ ಕುಶಲಕರ್ಮಿಗಳಿಗೆ ಕಾಯ್ದಿರಿಸಿ ರಿಯಾಯಿತಿ ದರದಲ್ಲಿ ಹಂಚಿಕೆ ಮಾಡುವುದು.
5. ಚರ್ಮ ಕುಶಲಕರ್ಮಿಗಳ ಸಮೂಹಗಳನ್ನು / ಸಂಕೀರ್ಣಗಳನ್ನು / ಕ್ಲಸ್ಟರ್‌ಗಳನ್ನು ನಿರ್ಮಾಣ ಮಾಡಲು ಜಿಲ್ಲಾಡಳಿತದಿಂದ ಸರ್ಕಾರಿ ಜಮೀನು ಮಂಜೂರು ಮಾಡುವುದು.
6. ಚರ್ಮ ಕುಶಲಕರ್ಮಿಗಳು ತಯಾರಿಸುತ್ತಿರುವ ಉತ್ಪನ್ನಗಳಿಗೆ ಮಾರುಕಟ್ಟೆ ವ್ಯವಸ್ಥೆ ಕಲ್ಪಿಸುವುದು.
7. ಚರ್ಮಕಾರರು ಅಸಂಘಟಿತ ಕಾರ್ಮಿಕ ವಲಯದಡಿ ಬರುವುದರಿಂದ ಕೇಂದ್ರ ಸರ್ಕಾರದಿಂದ ವಿವಿಧ ಸೌಲಭ್ಯಗಳನ್ನು ಪಡೆಯಲು ಅನುವಾಗುವಂತೆ ಇ-ಶ್ರಮ್ ಪೋರ್ಟಲ್‌ನಲ್ಲಿ ನೊಂದಾವಣಿ ಮಾಡಿಸುವುದು.
8. ಚರ್ಮ ಕುಶಲಕರ್ಮಿಗಳಿಗಾಗಿ ಸರ್ಕಾರ/ ನಿಗಮ ಹಮ್ಮಿಕೊಳ್ಳುವ ಯೋಜನೆ/ಕಾರ್ಯಕ್ರಮಗಳ ಬಗ್ಗೆ ವ್ಯಾಪಕವಾಗಿ ಪ್ರಚಾರ ಮಾಡಲು ಸಂಬಂಧಿಸಿದವರಿಗೆ ಸೂಚಿಸುವುದು.
9. ಚರ್ಮಕುಶಲಕರ್ಮಿಗಳ ಮಕ್ಕಳನ್ನು ಸಮಾಜ ಕಲ್ಯಾಣ ಇಲಾಖೆ ವ್ಯಾಪ್ತಿಯ ವಸತಿ ಶಾಲೆ ಕಾಲೇಜುಗಳಲ್ಲಿ ದಾಖಲಿಸಿಕೊಳ್ಳಲು ಸೂಚನೆ ನೀಡುವುದು.

ಚರ್ಮ ಕುಶಲಕರ್ಮಿಗಳ ಸಮಸ್ಯೆಗಳನ್ನು ಇತ್ಯರ್ಥಪಡಿಸಿದ ಬಗ್ಗೆ ನಡವಳಿಗಳನ್ನು ಸಮಿತಿಯ ಸದಸ್ಯರಾದ ಜಂಟಿ/ಉಪ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ ಮತ್ತು

Scanned with CamScanner

ಸಮಿತಿಯ ಸದಸ್ಯ ಕಾರ್ಯದರ್ಶಿಗಳು ಸಿದ್ಧಪಡಿಸಿ ಸರ್ಕಾರ ಹಾಗೂ ಡಾ.ಬಾಬು ಜಗಜೀವನ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮಕ್ಕೆ ಅಗತ್ಯ ಕ್ರಮಕ್ಕಾಗಿ ಕಳುಹಿಸುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

3/6/2022

(ಪಿ.ಎನ್.ನಾಗರಾಜ್ )
ಸರ್ಕಾರದ ಉಪ ಕಾರ್ಯದರ್ಶಿ-3(ಪ್ರ)
ಸಮಾಜ ಕಲ್ಯಾಣ ಇಲಾಖೆ.

ಇವರಿಗೆ,

1. ಮಹಾಲೇಖಪಾಲರು, (ಲೆಕ್ಕಪತ್ರ/ಲೆಕ್ಕ ಪರಿಶೋಧನೆ) ಕರ್ನಾಟಕ, ಬೆಂಗಳೂರು.
2. ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು.
3. ವ್ಯವಸ್ಥಾಪಕ ನಿರ್ದೇಶಕರು, ಡಾ.ಬಾಬು ಜಗಜೀವನ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮ, ಬೆಂಗಳೂರು.
4. ಎಲ್ಲಾ ಜಿಲ್ಲೆಗಳ ಜಂಟಿ / ಉಪ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ.
5. ಶಾಖಾ ರಕ್ಷಾ ಕಡತ/ ಹೆಚ್ಚುವರಿ ಪ್ರತಿಗಳು

ಪ್ರತಿ ಮಾಹಿತಿಗಾಗಿ

1. ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ, ವಿಕಾಸಸೌಧ.
3. ಸರ್ಕಾರದ ಉಪ ಕಾರ್ಯದರ್ಶಿ 1 ಮತ್ತು 2 ರವರ ಆಪ್ತ ಸಹಾಯಕರು, ವಿಕಾಸಸೌಧ, ಬೆಂಗಳೂರು.

****

Scanned with CamScanner